**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಡೂರು**

**ಸಿಸಿ. ನಂ.2155/2023**

ಫಿರ್ಯಾದಿ : **ಕಡೂರು ಪೊಲೀಸ್ ಠಾಣೆ**

ವಿರುದ್ಧ

ಆರೋಪಿಗಳು :
1. ಬಸವರಾಜು ಬಿನ್ ಲೇಟ್ ನಾಗರಾಜಪ್ಪ (ಮೃತಪಟ್ಟಿರುತ್ತಾರೆ)
2. ಶ್ರೀನಿವಾಸ ಬಿನ್ ಲೇಟ್ ರಾಮಣ್ಣ, ವಯಸ್ಸು ಸಮಾರು 31 ವರ್ಷ,
3. ಗಿರೀಶ ಬಿನ್ ಲೇಟ್ ರಾಮಣ್ಣ, ವಯಸ್ಸು ಸುಮಾರು 33 ವರ್ಷ,

ವಾಸಃ ಕಡುರು ಟೌನ್, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

# ::ದೋಷಾರೋಪಣೆಃ

ಶ್ರೀಮತಿ ಸವಿತರಾಣಿ ಹೆಚ್.ವಿ., ಬಿ.ಎ.ಎಲ್., ಎಲ್.ಎಲ್.ಬಿ., 2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಕಡೂರು ಆದ ನಾನು ಈ ಮೂಲಕ ಕೆಳಕಂಡಂತೆ ಆಪಾದಿತರಾದ ನಿಮ್ಮಗಳ ಮೇಲೆ ಹೊರೆಸುವ ದೋಷಾರೋಪಣೆ.

ಮೊದಲನೇಯದಾಗಿ, ದಿನಾಂಕ 25.03.2023 ರಂದು ಸಂಜೆ 6.30 ಗಂಟೆಯಲ್ಲಿ ಕಡೂರು ಪೋಲಿಸ್ ಠಾಣಾ ಸರಹದ್ದಿನ ಕಡುರು ಟೌನ್ ಉಪೇಂದ್ರನಾಥ

ಬಡಾವಣೆ ಸಮೀಪವಿರುವ ಶ್ರೀಮತಿ ಗೌರಮ್ಮರವರಿಗೆ ಸೇರಿದ ಸರ್ವೆ ನಂಬರ್ 112/2 ಬಿ ಜಮೀನಿನಲ್ಲಿರುವ ಅಡಿಕೆ ತೋಟಕ್ಕೆ ಚಾಸಾ.1 ರವರು ನೀರು ಹಾಯಿಸಲು ಹೋದಾಗ ಸದರಿ ಜಮೀನಿನ ಪಕ್ಕದಲ್ಲಿರುವ ಮೃತ 1 ನೇ ಆರೋಪಿಯು ಚಾಸಾ.1 ರವರ ಜಮೀನಿನಲ್ಲಿ 1 ಅಡಿ ಜಾಗ ಒತ್ತುವರಿ ಮಾಡಿ ಕಾಂಪೌಂಡ್ ನಿರ್ಮಿಸಿದ್ದು, ಸದರಿ ವಿಚಾರವಾಗಿ ಚಾಸಾ.1 ರವರು ಮೃತ ನೇ ಆರೋಪಿಗೆ ಕೇಳಿದಾಗ, ಮೃತ 1 ನೇ ಆರೋಪಿಯು ಈ ಪ್ರಕರಣದ ಉಳಿದ ಆರೋಪಿತರೊಂದಿಗೆ ಸೇರಿಕೊಂಡು ಸಮಾನ ಉದ್ದೇಶದಿಂದ ಚಾಸಾ.1 ರವರಿಗೆ ಅವರ ಶಾಂತಿಭಂಗಕ್ಕೆ ಪ್ರೇರೇಪಣೆ ನೀಡುವ ರೀತಿಯಲ್ಲಿ ಅವಾಚ್ಯವಾಗಿ ಬೈದು ನಿಂದಿಸಿರುವ ಕಾರಣ ಆರೋಪಿತರಾದ ನೀವು **ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ  ಸಂಜ್ಞೇಯ ಒಳಗೆ ಮಾಡಿರುವಿರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ ಮುಂದುವರಿದು, ನಿಮ್ಮ ಪೈಕಿ 2 ನೇ ಆರೋಪಿತರಾದ ನೀವು ಚಾಸಾ.1 ರವರಿಗೆ ಕಬ್ಬಿಣದ ರಾಡಿನಿಂದ ತಲೆಯ ಮಧ್ಯಭಾಗಕ್ಕೆ ಹೊಡೆದು ರಕ್ತಗಾಯ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟುಮಾಡಿರುವ ಕಾರಣ ಆರೋಪಿತರಾದ ನೀವು **ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ  ಸಂಜ್ಞೇಯ ಒಳಗೆ ಮಾಡಿರುವಿರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ ಮುಂದುವರಿದು, ನಿಮ್ಮ ಪೈಕಿ 2 ನೇ ಆರೋಪಿತರಾದ ನೀವು ಚಾಸಾ.1 ರವರ ಕೈಗಳನ್ನು ಹಿಡಿದುಕೊಂಡು ಮುಂದೆ ಹೋಗಲು ಬಿಡದೆ ತಡೆದಿರುವ ಕಾರಣ ಆರೋಪಿತರಾದ ನೀವು **ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ ಕಲಂ 34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ನಾಲ್ಕನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ ಮುಂದುವರಿದು, ನಿಮ್ಮ ಪೈಕಿ 2 ನೇ ಆರೋಪಿತರಾದ ನೀವು ಚಾಸಾ.1 ರವರ ಕೈಗಳನ್ನು ಹಿಡಿದುಕೊಂಡು ಮುಂದೆ ಹೋಗಲು ಬಿಡದೆ ತಡೆದು ಉಳಿದ 3 ನೇ ಆರೋಪಿ ಹಾಗೂ ಮೃತ 1 ನೇ ಆರೋಪಿಗೆ ಚಾಸಾ.1 ರವರಿಗೆ ಹೊಡೆಯಲು ಕುಮ್ಮಕ್ಕು ನೀಡಿರುವ ಕಾರಣ ಆರೋಪಿತರಾದ ನೀವು **ಭಾರತೀಯ ದಂಡ ಸಂಹಿತೆ ಕಲಂ 114 ಸಹವಾಚಕ ಕಲಂ 34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಕೊನೆಯಾದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ ಮುಂದುವರಿದು, 2 ಮತ್ತು 3 ನೇ ಆರೋಪಿತರಾದ ನೀವು ಮೃತ 1 ನೇ ಆರೋಪಿತನೊಂದಿಗೆ ಸೇರಿಕೊಂಡು ಚಾಸಾ.1 ರವರಿಗೆ ನಿನ್ನನ್ನು ಬಿಡುವುದಿಲ್ಲ ಎಂದು ಪ್ರಾಣ ಬೆದರಿಕೆ ಹಾಕಿರುವ ಕಾರಣ ಆರೋಪಿತರಾದ ನೀವು **ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

1. ನಿಮಗೆ ಈಗ ಓದಿ ಹೇಳಿದ ಆರೋಪವು ತಿಳಿಯಿತೆ?

2 ನೇ ಆರೋಪಿ ಉತ್ತರಃ

3 ನೇ ಆರೋಪಿ ಉತ್ತರಃ

2. ನಿಮ್ಮ ಮೇಲೆ ಇರುವ ಆರೋಪವನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೆ?

2 ನೇ ಆರೋಪಿ ಉತ್ತರಃ

3 ನೇ ಆರೋಪಿ ಉತ್ತರಃ

ಈ ಮೇಲಿನ ಆರೋಪಣೆಯನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ ತಿಳಿಸಿ ಅವರು ನೀಡಿದ ಉತ್ತರವನ್ನು ಯಥಾ ಪ್ರಕಾರವಾಗಿ ದಾಖಲಿಸಿಕೊಂಡಿದ್ದೇನೆ.

ದಿನಾಂಕಃ 23 ನೇ ಸೆಪ್ಟಂಬರ್ 2024

**Sd/-**
**(ಶ್ರೀಮತಿ ಸವಿತರಾಣಿ ಹೆಚ್.ವಿ.)**
**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆಎಂಎಫ್‌ಸಿ, ಕಡೂರು.**